ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ: ಕಾಶಿಇ/ಶೈವಿ/97/ಕೊಮಹಾ/2018-19

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಅರಮನೆ ರಸ್ತೆ, ಬೆಂಗಳೂರು.
ದಿನಾಂಕ .11.2018

## ನೆನಪೋಲೆ

**ವಿಷಯ:** ಚುನಾವಣಾ ಪ್ರಕ್ರಿಯೆ ಕುರಿತು ರಾಜ್ಯದ ಎಲ್ಲಾ ಪದವಿ ಕಾಲೇಜುಗಳ ವಿದ್ಯಾರ್ಥಿಗಳಲ್ಲಿ ಮತದಾನದ ಬಗ್ಗೆ ಅರಿವು (SVEEP) ಮೂಡಿಸುವ ಸಂಬಂಧ ವಿವಿಧ ಸ್ಪರ್ಧೆಗಳನ್ನು ಆಯೋಜಿಸುವ ಬಗ್ಗೆ.

**ಉಲ್ಲೇಖ:**
1. ಸಂಖ್ಯೆ: ಡಿಪಿಎಆರ್/70/ಸುಂಪ/ಹೆಚ್ಚುವರಿ.ಸಿಇಒ-1 2018 ದಿನಾಂಕ:20.08.2018
2. ಈ ಕಛೇರಿ ಸಮ ಸಂಖ್ಯೆ ಪತ್ರ ದಿನಾಂಕ: 29.09.2018.

**********

ಭಾರತದ ಚುನಾವಣಾ ಆಯೋಗವು ಭಾವೀ ಮತದಾರರಾದ ಇಂದಿನ ವಿದ್ಯಾರ್ಥಿಗಳಲ್ಲಿ ಚುನಾವಣಾ ಪ್ರಕ್ರಿಯೆಯ ಬಗ್ಗೆ ಅರಿವು ಮೂಡಿಸುವ ಉದ್ದೇಶದಿಂದ ರಾಜ್ಯದ ಎಲ್ಲಾ ಪದವಿ ಕಾಲೇಜುಗಳಲ್ಲಿ ಎಂದರೆ, 'ಚುನಾವಣಾ ಸಾಕ್ಷರತಾ ಕ್ಲಬ್' (Electoral Literacy Club) ಗಳನ್ನು ಸ್ಥಾಪಿಸಿ ಕಾಲೇಜುಮಟ್ಟ, ತಾಲ್ಲೂಕುಮಟ್ಟ ಹಾಗೂ ಜಿಲ್ಲಾಮಟ್ಟದಲ್ಲಿ ಎಸ್ಸೆ ರೈಟಿಂಗ್, ಕೊಲಾಜ್ ಮೇಕಿಂಗ್, ಪೋಸ್ಟರ್ ಮೇಕಿಂಗ್ ಹಾಗೂ ಕ್ವಿಸ್ ಸ್ಪರ್ಧೆಗಳನ್ನು ನಡೆಸಿ ಮುಂದಿನ ಹಂತಗಳಿಗೆ ಕಳುಹಿಸಲು ಉಲ್ಲೇಖ(2)ರಲ್ಲಿ ಸೂಚಿಸಲಾಗಿತ್ತು.

ಅದರಂತೆ ಅಕ್ಟೋಬರ್ 2018ರ ಅಂತ್ಯಕ್ಕೆ ಕಾಲೇಜುಮಟ್ಟದಲ್ಲಿ ವಿದ್ಯಾರ್ಥಿಗಳ ನೊಂದಣಿ ಕಾರ್ಯ ಮುಗಿಸಿ, ನವೆಂಬರ್ 2018ರ ಮಾಹೆಯಲ್ಲಿ ಸ್ಪರ್ಧಾತ್ಮಕ ಚಟುವಟಿಕೆಗಳನ್ನು ಕಾಲೇಜು ಮಟ್ಟದಲ್ಲಿ ನಡೆಸಿ ವಿಜೇತರನ್ನು ತಾಲ್ಲೂಕು ಮಟ್ಟದಲ್ಲಿ ಭಾಗವಹಿಸಲು ಕಳುಹಿಸಬೇಕಾಗಿರುತ್ತದೆ. ನಂತರ ತಾಲ್ಲೂಕು ಮಟ್ಟದಲ್ಲಿ ಆಯ್ಕೆಯಾದ ಸ್ಪರ್ಧಿಗಳನ್ನು ಡಿಸೆಂಬರ್ ಎರಡನೇ ವಾರದಲ್ಲಿ ಜಿಲ್ಲಾ ಮಟ್ಟದ ಸ್ಪರ್ಧೆಗಳಲ್ಲಿ ಭಾಗವಹಿಸಲು ಕಳುಹಿಸಬೇಕಾಗಿರುತ್ತದೆ.

ಮುಂದುವರೆದು, ಈ ನೆನಪೋಲೆಯೊಂದಿಗೆ ಲಗತ್ತಿಸಿರುವ ಪತ್ರದಲ್ಲಿ ಸೂಚಿಸಿರುವಂತೆ ಸ್ಪರ್ಧೆಗಳನ್ನು ನಡೆಸಿ ಉಲ್ಲೇಖ(1&2)ರ ಪತ್ರದನ್ವಯ ಆಯಾ ಅನುಬಂಧಗಳಲ್ಲಿ ಮಾಹಿತಿಯನ್ನು ಕಳುಹಿಸಲು ಹಾಗೂ ವೇಳಾಪಟ್ಟಿಯಂತೆ ನಿಗದಿತ ಸಮಯದಲ್ಲಿ ಚಟುವಟಿಕೆಗಳನ್ನು ನಡೆಸಲು ತಿಳಿಸಲಾಗಿದೆ.

For any queries or clarification, mail to consveep@gmail.com or Phone:080-22288823, contact Mr. Praveen-8892741320 or Mr.Ramesh-8867644865.

ತಮ್ಮ ವಿಶ್ವಾಸಿ,

*ಅಡಕ: ಉಲ್ಲೇಖಿತ ಸುತ್ತೋಲೆಗಳು*

ಕಾಲೇಜು ಶಿಕ್ಷಣ ನಿರ್ದೇಶಕರು

ಪ್ರತಿಯನ್ನು:
1. Sri. Sanjeev kumar, Chief Election Officer and Ex. Officio, Addl. Chief Secretary to Govt.
2. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತಶಾಖೆ, ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು
3. ಕುಲಸಚಿವರು, ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು
4. ಕುಲಸಚಿವರು, ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯ, ಬೆಂಗಳೂರು

5. ಕುಲಸಚಿವರು, ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಬೆಂಗಳೂರು
6. ಕುಲಸಚಿವರು, ಮೈಸೂರು ವಿಶ್ವವಿದ್ಯಾಲಯ, ಮೈಸೂರು
7. ಕುಲಸಚಿವರು, ಕನ್ನಡ ವಿಶ್ವವಿದ್ಯಾಲಯ, ಹಂಪಿ
8. ಕುಲಸಚಿವರು, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ
9. ಕುಲಸಚಿವರು, ಗುಲ್ಬರ್ಗಾ ವಿಶ್ವವಿದ್ಯಾಲಯ, ಗುಲ್ಬರ್ಗಾ
10. ಕುಲಸಚಿವರು, ಮಂಗಳೂರು ವಿಶ್ವವಿದ್ಯಾಲಯ, ಮಂಗಳೂರು
11. ಕುಲಸಚಿವರು, ಕುವೆಂಪು ವಿಶ್ವವಿದ್ಯಾಲಯ, ಶಿವಮೊಗ್ಗ
12. ಕುಲಸಚಿವರು, ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ, ಬಿಜಾಪುರ
13. ಕುಲಸಚಿವರು, ತುಮಕೂರು ವಿಶ್ವವಿದ್ಯಾಲಯ, ತುಮಕೂರು
14. ಕುಲಸಚಿವರು, ದಾವಣಗೆರೆ ವಿಶ್ವವಿದ್ಯಾಲಯ, ದಾವಣಗೆರೆ
15. ಕುಲಸಚಿವರು, ರಾಣಿಚೆನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ
16. ಕುಲಸಚಿವರು, ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯ, ಬಳ್ಳಾರಿ
17. ಕುಲಸಚಿವರು, ವಿಶ್ವೇಶ್ವರಾಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ
18. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಪಂಚಾಯಿತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ
19. ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು,ಮಂಗಳೂರು, ಮೈಸೂರು. ಶಿವಮೊಗ್ಗ, ಧಾರವಾಡ ಮತ್ತು ಕಲಬುರಗಿ -- ಕಾಲೇಜುಮಟ್ಟ, ತಾಲ್ಲೂಕುಮಟ್ಟ ಹಾಗೂ ಜಿಲ್ಲಾಮಟ್ಟದ ಸ್ಪರ್ಧೆಗಳನ್ನು ನಡೆಸಿದ ವರದಿಗಳನ್ನು ಕ್ರೂಢೀಕರಿಸಿ ಸ್ಪರ್ಧೆ ನಡೆದ ಮಾಹೆಯಲ್ಲಿ ಕೇಂದ್ರ ಕಛೇರಿಗೆ ಸಲ್ಲಿಸುವುದು.
20. ಜಂಟಿ ನಿರ್ದೇಶಕರು, ಶೈಕ್ಷಣಿಕ ವಿಭಾಗ ಕಾಲೇಜು ಶಿಕ್ಷಣ ಇಲಾಖೆ, ಕೇಂದ್ರ ಕಛೇರಿ
21. ಎಲ್ಲಾ ಸರ್ಕಾರಿ, ಖಾಸಗಿ ಅನುದಾನಿತ & ಅನುದಾನರಹಿತ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ- ಸ್ಪರ್ಧೆಗಳಲ್ಲಿ ಭಾಗವಹಿಸಿದ ವಿವರಗಳನ್ನು ಪ್ರಾದೇಶಿಕ ಜಂಟಿ ನಿರ್ದೇಶಕರ ಕಛೇರಿಗೆ ಸಲ್ಲಿಸುವುದು
22. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು- ಇಲಾಖಾ ವೆಬ್‌ಸೈಟನಲ್ಲಿ ಅಳವಡಿಸಲು ತಿಳಿಸಲಾಗಿದೆ.

ಮುಖ್ಯ ಚುನಾವಣಾಧಿಕಾರಿಗಳು, ಕರ್ನಾಟಕ, ಇವರ ಕಚೇರಿ
ನಿರ್ವಾಚನ ನಿಲಯ, ಶೇಷಾದ್ರಿ ರಸ್ತೆ, ಬೆಂಗಳೂರು-560001

ಸಂಖ್ಯೆ : ಸಿಇಒ/70/ಚುಶಾಪ/ಮುಚುಅ-1/2018 ದಿನಾಂಕ 31.10.2018

## ಸುತ್ತೋಲೆ

ವಿಷಯ :- ವಿದ್ಯಾರ್ಥಿಗಳಿಗೆ ಸ್ಪರ್ಧಾತ್ಮಕ ಚಟುವಟಿಕೆಗಳನ್ನು ನಡೆಸುವುದು - ಎಸ್ಸೆ ರೈಟಿಂಗ್, ಕೊಲೇಜ್ ಮೇಕಿಂಗ್, ಪೋಸ್ಟರ್ ಮೇಕಿಂಗ್, ಕ್ವಿಜ್

ಉಲ್ಲೇಖ :- ಸಮಸಂಖ್ಯೆಯ ಸುತ್ತೋಲೆ ದಿನಾಂಕ 18.09.2018

-0-

ಪ್ರತಿ ವರ್ಷ ಜನವರಿ 25 ರ ದಿನವನ್ನು ರಾಷ್ಟ್ರೀಯ ಮತದಾರರ ದಿನಾಚರಣೆಯನ್ನು ಆಚರಿಸಲಾಗುತ್ತಿದೆ. ಈ ದಿನಾಚರಣೆ ಸಂಭಂದ 9ನೇ ತರಗತಿಯ ಮೇಲ್ಪಟ್ಟ ಮಕ್ಕಳಿಗೆ ಹಿಂದಿನ ವರ್ಷದಂತೆ ಈ ವರ್ಷವೂ ಸ್ಪರ್ಧಾತ್ಮಕ ಚಟುವಟಿಕೆಗಳನ್ನು ಏರ್ಪಡಿಸಲು ಉಲ್ಲೇಖಿತ ಸುತ್ತೋಲೆಯಲ್ಲಿ ತಿಳಿಸಲಾಗಿದೆ. ಅದನ್ನು ಮುಂದುವರೆಸುತ್ತಾ ಇದರ ಸಂಭಂದ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಬೇಕಾಗಿರುತ್ತದೆ.

ಜಿಲ್ಲಾ ಮಟ್ಟದಲ್ಲಿ ಈ ಕೆಳಕಂಡ ಸ್ಪರ್ಧಾತ್ಮಕ ಚಟುವಟಿಕೆಗಳನ್ನು ನಡೆಸಬೇಕಾಗಿರುತ್ತದೆ.

1. 9 ರಿಂದ 10ನೇ ತರಗತಿಯ ವಿದ್ಯಾರ್ಥಿಗಳಿಗೆ ಎಸ್ಸೆ ರೈಟಿಂಗ್ (ಪ್ರಭಂದ).
2. ಪದವಿ ಪೂರ್ವ ಕಾಲೇಜು / ಪಾಲಿಟೆಕ್ನಿಕ್ ವಿದ್ಯಾರ್ಥಿಗಳಿಗೆ ಎಸ್ಸೆ ರೈಟಿಂಗ್ (ಪ್ರಭಂದ).
3. ಕಾಲೇಜು/ ವಿಶ್ವವಿದ್ಯಾಲಯ/ ತಾಂತ್ರಿಕ ಸಂಸ್ಥೆಯ ವಿದ್ಯಾರ್ಥಿಗಳಿಗೆ ಎಸ್ಸೆ ರೈಟಿಂಗ್ (ಪ್ರಭಂದ).
4. ಆರ್ಟ್ಸ್ ಮತ್ತು ಡ್ರಾಯಿಂಗ್ ಶಾಲೆಯ ಮಕ್ಕಳಿಗೆ ಪೋಸ್ಟರ್ ರಚನೆ.
5. ಆರ್ಟ್ಸ್ ಮತ್ತು ಡ್ರಾಯಿಂಗ್ ಶಾಲೆಯ ಮಕ್ಕಳಿಗೆ ಕೊಲೇಜ್ ರಚನೆ.
6. ಕ್ವಿಜ್ ಎಲ್ಲಾ ವಿದ್ಯಾರ್ಥಿಗಳಿಗೆ

Scanned by CamScanner

ಈ ಸ್ಪರ್ಧೆಯಲ್ಲಿ ಮೊದಲನೆಯ ಬಹುಮಾನಕ್ಕೆ ರೂ 750/-. ಎರಡನೆಯ ಬಹುಮಾನಕ್ಕೆ ರೂ 500/- ಮತ್ತು ಮೂರನೆಯ ಬಹುಮಾನಕ್ಕೆ ರೂ 250/- ಗಳನ್ನೊಳಗೊಂಡ ಪುಸ್ತಕವನ್ನು ನೀಡಬೇಕಾಗಿರುತ್ತದೆ. ಪ್ರತಿ ಚಟುವಟಿಕೆಗಾಗಿ 30 ಜಿಲ್ಲಾ ಪಂಚಾಯತ್‌ಗಳಿಗೆ ರೂ 1500/- ರಂತೆ 6 ಚಟುವಟಿಕೆಗೆ ರೂ 9000/-ಹಾಗು ಸಾದಿಲ್ವಾರು ಖರ್ಚಿಗಾಗಿ ಪ್ರತಿ ಜಿಲ್ಲೆಗಳಿಗೆ ರೂ 25000/- ಗಳಂತೆ ಒಟ್ಟು ರೂ 34000/-ಗಳನ್ನು ಬಿಡುಗಡೆ ಮಾಡಲಾಗುವುದು

ರಾಜ್ಯ ಮಟ್ಟದಲ್ಲಿ ನಡೆಯುವ ಸ್ಪರ್ಧಾತ್ಮಕ ಚಟುವಟಿಕೆಗಳಲ್ಲಿ ಭಾಗವಹಿಸಲು ಜಿಲ್ಲೆಗಳಲ್ಲಿ ನಡೆಸಿದ ಸ್ಪರ್ಧಾತ್ಮಕ ಚಟುವಟಿಕೆಗಳಲ್ಲಿ ಭಾಗವಹಿಸಿ ಪ್ರಥಮ ಸ್ಥಾನ ಪಡೆದ ಒಬ್ಬ ವಿದ್ಯಾರ್ಥಿಯನ್ನು ಕಳುಹಿಸಬೇಕಾಗಿರುತ್ತದೆ.

ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಜಿಲ್ಲಾ ಮಟ್ಟದಲ್ಲಿ ಸ್ಪರ್ಧಾತ್ಮಕ ಚಟುವಟಿಕೆಗಳನ್ನು ನಡೆಸಲು ಅನುಕೂಲವಾಗುವಂತೆ ಶಾಲಾ ಮಟ್ಟದಲ್ಲಿ ಚಟುವಟಿಕೆ ನಡೆಸಿ, ಅಲ್ಲಿ ಆಯ್ಕೆ ಆದವರಂತಹವರಿಗೆ ತಾಲ್ಲೂಕು ಮಟ್ಟದಲ್ಲಿ ಸ್ಪರ್ಧಾತ್ಮಕ ಚಟುವಟಿಕೆಗಳನ್ನು ನಡೆಸಲು ಕ್ರಮ ಜರುಗಿಸಬೇಕಾಗಿರುತ್ತದೆ. ತಾಲ್ಲೂಕು ಮಟ್ಟದಲ್ಲಿ ಆಯ್ಕೆ ಆದ ವಿದ್ಯಾರ್ಥಿಗಳನ್ನು ಜಿಲ್ಲಾ ಮಟ್ಟದ ಸ್ಪರ್ಧಾತ್ಮಕ ಚಟುವಟಿಕೆಗಳಿಗೆ ಪರಿಗಣಿಸಬೇಕಾಗಿರುತ್ತದೆ. ಇದಕ್ಕೆ ಸೂಕ್ತ ಕ್ರಮಗಳನ್ನು ಜಿಲ್ಲಾ ಮಟ್ಟದಲ್ಲಿ ತೆಗೆದುಕೊಳ್ಳಬೇಕಾಗಿರುತ್ತದೆ. ದಿನಾಂಕ 18.09.2018 ರ ಸುತ್ತೋಲೆಯಲ್ಲಿ ತಿಳಿಸಿರುವ ಎಸ್ಸೆಗಳ ವಿಷಯ, ಪೋಸ್ಟರ್ ಮತ್ತು ಕೊಲಾಜ್‌ಗಳ ವಿಷಯ ಕಾರ್ಯಕ್ರಮದ ವೇಳಾ ಪಟ್ಟಿಯಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ.

ಇದೇ ಸುತ್ತೋಲೆಯಲ್ಲಿ ನಿಗದಿಪಡಿಸಿರುವ ವೇಳಾ ಪಟ್ಟಿಯಂತೆ ಅಕ್ಟೋಬರ್ 2018ರ ಅಂತ್ಯಕ್ಕೆ ಶಾಲೆ ಮತ್ತು ಕಾಲೇಜು ಮಟ್ಟದಲ್ಲಿ ವಿದ್ಯಾರ್ಥಿಗಳ ನೋಂದಣಿ ಕಾರ್ಯ ಮುಗಿದು, ನವಂಬರ್ 2018 ರ ಮಾಹೆಯಲ್ಲಿ ಸ್ಪರ್ಧಾತ್ಮಕ ಚಟುವಟಿಕೆಗಳನ್ನು ಶಾಲಾ ಮತ್ತು ಕಾಲೇಜು ಮಟ್ಟದಲ್ಲಿ ಹಾಗೂ ತಾಲ್ಲೂಕು ಮಟ್ಟದಲ್ಲಿ ಪ್ರಾರಂಭಿಸಬೇಕಾಗಿರುತ್ತದೆ. ಅಲ್ಲಿ ಆಯ್ಕೆ ಆದ ಮಕ್ಕಳ ವಿವರಗಳನ್ನು ಜಿಲ್ಲಾ ಮಟ್ಟದಲ್ಲಿ ಪಡೆದು ಡಿಸೆಂಬರ್ 2ನೆ ವಾರದಲ್ಲಿ ಸ್ಪರ್ಧಾತ್ಮಕ ಚಟುವಟಿಕೆಗಳನ್ನು ನಡೆಸಬೇಕಾಗಿರುತ್ತದೆ.

Scanned by CamScanner

ಪ್ರಸ್ತುತ ಸಾಲಿನ [illegible] ಶಾಲೆ ಮತ್ತು ಕಾಲೇಜು [illegible] [illegible] ನೋಂದಣಿ ಕಾರ್ಯ ಮುಗಿಯುತ್ತಿದ್ದು. ದಿನಾಂಕ 18.09.2018 ರ ಸುತ್ತೋಲೆಯೊಂದಿಗೆ ಲಗತ್ತಿಸಿದ ಅನುಬಂಧ 4 ರಲ್ಲಿ ಮಾಹಿತಿಯನ್ನು ಕಳುಹಿಸಲು ತಾವು ಸಂಬಂಧಪಟ್ಟವರಿಗೆ ನಿಗದಿತ ಸಮಯದಲ್ಲಿ ಸೂಚನೆಗಳನ್ನು ನೀಡಲು ಕೋರಲಾಗಿದೆ.

ತಮ್ಮ ನಂಬುಗೆಯ

(ಕುಮಾರ್ ಸಿಂಗ್)

ಉಪ ಮುಖ್ಯ ಚುನಾವಣಾಧಿಕಾರಿಗಳು 2

ಪ್ರತಿ:-

1. ಸರ್ಕಾರದ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಕರ್ನಾಟಕ ಸರ್ಕಾರ
2. ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ
3. ಆಯುಕ್ತರು, ಪದವಿಪೂರ್ವ ಶಿಕ್ಷಣ ಮಂಡಳಿ, ಬೆಂಗಳೂರು.
4. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು
5. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು
6. ನಿರ್ದೇಶಕರು, ಕರ್ನಾಟಕ ಪ್ರೌಢ ಶಿಕ್ಷಣ ಮಂಡಳಿ, ಬೆಂಗಳೂರು
7. ಎಲ್ಲಾ ಜಿಲ್ಲಾ ಚುನಾವಣಾಧಿಕಾರಿಗಳು.
8. ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
9. ಸಂಬಂಧಪಟ್ಟವರಿಗೆ

Scanned by CamScanner